**All India Radio: Bangalore**
**National Bulletin In Kannada**
**10.03.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**10.03.2026 07.35 a.m.**
**<><><><>**

ಮುಖ್ಯಾಂಶಗಳು

1. ಹೆಚ್ಚಿನ ಎಲ್‌ಪಿಜಿ ಉತ್ಪಾದಿಸುವಂತೆ ತೈಲ ಸಂಸ್ಕರಣಾಗಾರಗಳಿಗೆ ಕೇಂದ್ರ ಸರ್ಕಾರ ಆದೇಶ
2. ನೇಪಾಳ ಚುನಾವಣೆ: ನೂತನ ಸರ್ಕಾರಕ್ಕೆ ಶುಭ ಕೋರಿದ ಪ್ರಧಾನಿ ನರೇಂದ್ರ ಮೋದಿ
3. ಪಶ್ಚಿಮ ಏಷ್ಯಾ ಬಿಕ್ಕಟ್ಟು, ಉಕ್ರೇನ್ ಸಂಘರ್ಷ ಕುರಿತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್-ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚರ್ಚೆ
4. ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್: ಭಾರತ-ಸ್ಕಾಟ್ಲೆಂಡ್ ಪಂದ್ಯ ಡ್ರಾ ದಲ್ಲಿ ಅಂತ್ಯ

<><><><>

ಕೇಂದ್ರ ಸರ್ಕಾರ ತೈಲ ಸಂಸ್ಕರಣಾಗಾರಗಳಿಗೆ ಹೆಚ್ಚಿನ ಎಲ್‌ಪಿಜಿ ಉತ್ಪಾದನೆಗಾಗಿ ಮತ್ತು ಅಂತಹ ಹೆಚ್ಚುವರಿ ಉತ್ಪಾದನೆಯನ್ನು ದೇಶೀಯ ಬಳಕೆಗೆ ಬಳಸಲು ಆದೇಶ ಹೊರಡಿಸಿದೆ. ಇಂಧನ ಪೂರೈಕೆಯಲ್ಲಿನ ಪ್ರಸ್ತುತ ಭೌಗೋಳಿಕ ರಾಜಕೀಯ ಅಡೆತಡೆಗಳು ಮತ್ತು ಎಲ್‌ಪಿಜಿ ಪೂರೈಕೆಯ ಮೇಲಿನ ನಿರ್ಬಂಧಗಳ ಮಧ್ಯೆ ಈ ಕ್ರಮ ಕೈಗೊಳ್ಳಲಾಗಿದೆ. ಕೇಂದ್ರ ಸರ್ಕಾರ ಮನೆಗಳಿಗೆ ದೇಶೀಯ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಿದೆ. ಸಂಗ್ರಹಣೆ ಮತ್ತು ಕಾಳ ದಂಧೆಯನ್ನು ತಪ್ಪಿಸಲು ೨೫ ದಿನಗಳ ಅಂತರದ ಬುಕಿಂಗ್ ಅವಧಿಯನ್ನು ಪರಿಚಯಿಸಿದೆ. ಆಮದು ಮಾಡಿಕೊಂಡ ಎಲ್‌ಪಿಜಿ ಯಿಂದ ಆಸ್ಪತ್ರೆಗಳು ಮತ್ತು ಶಿಕ್ಷಣ ಸಂಸ್ಥೆಗಳಂತಹ ಅಗತ್ಯ ದೇಶೀಯವಲ್ಲದ ವಲಯಗಳಿಗೆ ಸರಬರಾಜಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

<><><><>

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯನ್ನು ತಗ್ಗಿಸಲು ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಅನುಸರಿಸಬೇಕು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿ ಕುರಿತು ಲೋಕಸಭೆಯಲ್ಲಿ ನಿನ್ನೆ ಮಾತನಾಡಿದ ಅವರು, ಕಳೆದ

ತಿಂಗಳು ೧೦ ರಂದು ಭಾರತ ಸರ್ಕಾರ ಅಲ್ಲಿನ ಪರಿಸ್ಥಿತಿ ಬಗ್ಗೆ ಕಳವಳ ವ್ಯಕ್ತಪಡಿಸಿ, ಎರಡೂ ಕಡೆಯವರು ಸಂಯಮದಿಂದ ವರ್ತಿಸುವಂತೆ ಒತ್ತಾಯಿಸಿತ್ತು. ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಮುಂದುವರೆಸಬೇಕು ಎಂಬುದು ಭಾರತದ ನಿಲುವಾಗಿದೆ ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು, ಆ ಪ್ರದೇಶದ ಬೆಳವಣಿಗೆಗಳ ಕುರಿತು ನಿರಂತರವಾಗಿ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ತೀವ್ರಗೊಳ್ಳುತ್ತಲೇ ಇದೆ ಮತ್ತು ಅಲ್ಲಿನ ಭದ್ರತಾ ಪರಿಸ್ಥಿತಿ ಹದಗೆಟ್ಟಿದೆ. ಇತರ ದೇಶಗಳಿಗೂ ಸಂಘರ್ಷ ವಿಸ್ತರಿಸಿದೆ. ಇದು ಸಾಮಾನ್ಯ ಜನರ ಜೀವನದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಅವರು ಹೇಳಿದರು. ಗಲ್ಫ್ ರಾಷ್ಟ್ರಗಳಲ್ಲಿ ಒಂದು ಕೋಟಿಗೂ ಹೆಚ್ಚು ಭಾರತೀಯರು ಇದ್ದಾರೆ. ಅಧ್ಯಯನ ಮತ್ತು ಉದ್ಯೋಗಕ್ಕಾಗಿ ಇರಾನ್‌ನಲ್ಲಿಯೂ ಹಲವು ಭಾರತೀಯರು ಇದ್ದಾರೆ. ಭಾರತದ ಇಂಧನ ಭದ್ರತೆಗೆ ಈ ಪ್ರದೇಶ ಪ್ರಮುಖವಾದದ್ದು. ತೈಲ ಮತ್ತು ಅನಿಲದ ಪ್ರಮುಖ ಪೂರೈಕೆದಾರರನ್ನು ಈ ಪ್ರದೇಶ ಒಳಗೊಂಡಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ವಿವರಿಸಿದರು. ಪರಿಸ್ಥಿತಿಯ ಮೇಲ್ವಿಚಾರಣೆ ಮಾಡಲು ಮತ್ತು ಸಹಾಯಕ್ಕಾಗಿ ಮೀಸಲಾದ ವಿಶೇಷ ನಿಯಂತ್ರಣ ಕೊಠಡಿಯನ್ನು ವಿದೇಶಾಂಗ ಸಚಿವಾಲಯ ಸ್ಥಾಪಿಸಿದೆ. ನಿನ್ನೆಯವರೆಗೆ ೬೭ ಸಾವಿರ ಭಾರತೀಯ ಪ್ರಜೆಗಳು ಸ್ವದೇಶಕ್ಕೆ ಮರಳಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<><><>

ಹಣದುಬ್ಬರ ನಿಯಂತ್ರಿಸಲು ಮತ್ತು ಸಾಮಾನ್ಯ ನಾಗರಿಕರ ಮೇಲಿನ ಅದರ ಪರಿಣಾಮವನ್ನು ತಗ್ಗಿಸಲು ಕೇಂದ್ರ ಸರ್ಕಾರ, ಹಣಕಾಸು ಮತ್ತು ವ್ಯಾಪಾರ ನೀತಿ ಸೇರಿದಂತೆ ಹಲವಾರು ಆಡಳಿತಾತ್ಮಕ ಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆಯಿಂದ, ಹಣದುಬ್ಬರದ ಮೇಲೆ ಉಂಟಾಗುವ ಮಧ್ಯಮಾವಧಿಯ ಪರಿಣಾಮ, ವಿನಿಮಯ ದರ, ಜಾಗತಿಕ ಬೇಡಿಕೆ ಮತ್ತು ಪೂರೈಕೆ ಪರಿಸ್ಥಿತಿ ಸೇರಿದಂತೆ ಹಲವಾರು ಅಂಶಗಳನ್ನು ಅವಲಂಬಿಸಿರುತ್ತದೆ ಎಂದು ಹೇಳಿದ್ದಾರೆ. ಕಳೆದ ತಿಂಗಳು ೨೮ ರಂದು ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಪ್ರಾರಂಭವಾದಾಗಿನಿಂದ, ಜಾಗತಿಕ ಕಚ್ಚಾ ತೈಲ ದರ ಏರಿಕೆ ಹಾದಿಯಲ್ಲಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

<><><>

ನೇಪಾಳ ಚುನಾವಣೆಯಲ್ಲಿ ಆರ್‌ಎಸ್‌ಪಿಯ ಅದ್ಭುತ ಯಶಸ್ಸಿಗೆ ಮತ್ತು ಚುನಾವಣೆಯಲ್ಲಿ ಗೆಲುವಿಗಾಗಿ ರಾಷ್ಟ್ರೀಯ ಸ್ವತಂತ್ರ ಪಕ್ಷದ ಅಧ್ಯಕ್ಷ ರಬಿ ಲಾಮಿಚಾನೆ ಮತ್ತು ಆರ್‌ಎಸ್‌ಪಿಯ ಹಿರಿಯ ನಾಯಕ ಬಾಲೇಂದ್ರ ಶಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದರು. ಅವರೊಂದಿಗೆ ದೂರವಾಣಿ ಸಂಭಾಷಣೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು, ನೇಪಾಳದ ನೂತನ ಸರ್ಕಾರಕ್ಕೆ ಶುಭ ಕೋರಿದರು ಮತ್ತು ಎರಡೂ ದೇಶಗಳ ಪರಸ್ಪರ ಸಮೃದ್ಧಿ, ಪ್ರಗತಿ ಮತ್ತು ಯೋಗಕ್ಷೇಮಕ್ಕಾಗಿ ಅವರೊಂದಿಗೆ ಕೆಲಸ ಮಾಡುವ ಭಾರತದ ಬದ್ಧತೆಯನ್ನು ಪುನುರುಚ್ಚರಿಸಿದರು.

ಜಂಟಿ ಪ್ರಯತ್ನಗಳೊಂದಿಗೆ, ಭಾರತ ಮತ್ತು ನೇಪಾಳ ಸಂಬಂಧಗಳು ಮುಂದಿನ ವರ್ಷಗಳಲ್ಲಿ ಹೊಸ ಎತ್ತರವನ್ನು ತಲುಪುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದರು.

<><><>

ಭಾರತದ ನಾವೀನ್ಯ ಆರ್ಥಿಕ ವಲಯವು ದೇಶದ ಸಂಸ್ಕೃತಿ, ಆಹಾರ ಮತ್ತು ಸ್ಥಳೀಯ ಉತ್ಪನ್ನಗಳನ್ನು ಜಗತ್ತಿಗೆ ಪ್ರದರ್ಶಿಸುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. 'ಸಬ್ಕಾ ಸಾಥ್, ಸಬ್ಕಾ ವಿಕಾಸ್ - ಜನರ ಆಕಾಂಕ್ಷೆಗಳ ಪೂರೈಕೆ' ವಿಷಯದ ಬಜೆಟ್ ನಂತರದ ವೆಬಿನಾರ್‌ನಲ್ಲಿ ಅವರು ಮಾತನಾಡಿದರು. ಮನರಂಜನೆಯಲ್ಲಿ ತಂತ್ರಜ್ಞಾನ ಪ್ರಾಥಮಿಕ ಪಾತ್ರವನ್ನು ವಹಿಸುತ್ತಿದೆ. ಭಾರತೀಯ ನಾವೀನ್ಯಕಾರರು ಈ ವಲಯವನ್ನು ಮುನ್ನಡೆಸುವಲ್ಲಿ ಸಹಾಯ ಮಾಡಲು ವೇವ್ಸ್ ವೇದಿಕೆಯನ್ನು ಕಲ್ಪಿಸಲಾಗಿದೆ. ವೇವ್ಸ್ ಜಾಗತಿಕವಾಗಿ ಗುರುತಿಸಲ್ಪಟ್ಟ ವೇದಿಕೆಯಾಗಿದ್ದು, ಈ ವಲಯದಲ್ಲಿನ ಅಭಿವೃದ್ಧಿ ವಿಧಾನಗಳನ್ನು ಚರ್ಚಿಸಲು ನೀತಿ ನಿರೂಪಕರು ಮತ್ತು ಉದ್ಯಮ ನಾಯಕರನ್ನು ಒಟ್ಟುಗೂಡಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

<><><>

ನವದೆಹಲಿಯಲ್ಲಿ ಇಂದು ಸ್ವಯಂಸೇವಾ ಸಂಸ್ಥೆಗಳ ಸ್ಥಾಯಿ ಸಮಿತಿಯ ೩೫ನೇ ಸಭೆಯ ಅಧ್ಯಕ್ಷತೆಯನ್ನು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ವಹಿಸಲಿದ್ದಾರೆ. ಕೇಂದ್ರ ಸರ್ಕಾರದ ಪಿಂಚಣಿದಾರರ ಕಲ್ಯಾಣಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆಯು ಈ ಸಭೆಯನ್ನು ಆಯೋಜಿಸಿದೆ. ನೀತಿ ಸಮನ್ವಯವನ್ನು ಬಲಪಡಿಸಲು ಮತ್ತು ಕುಂದು-ಕೊರತೆಗಳನ್ನು ಪರಿಹರಿಸಲು ಈ ಸಭೆಯು ಸಹಕಾರಿಯಾಗಲಿದೆ. ಆ ಮೂಲಕ ಕೇಂದ್ರ

ಸರ್ಕಾರದ ಪಿಂಚಣಿದಾರರ ಜೀವನವನ್ನು ಸುಗಮಗೊಳಿಸಲು ಸಹಾಯವಾಗಲಿದೆ ಎಂದು ಕೇಂದ್ರ ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆ ತಿಳಿಸಿದೆ.

<><><><>

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದೂರವಾಣಿ ಸಂಭಾಷಣೆಯ ಸಮಯದಲ್ಲಿ ಇರಾನ್ ವಿರುದ್ಧದ ಅಮೆರಿಕ-ಇಸ್ರೇಲ್ ಯುದ್ಧ ಮತ್ತು ಉಕ್ರೇನ್ ಸಂಘರ್ಷದ ಬಗ್ಗೆ ಚರ್ಚಿಸಿದ್ದಾರೆ ಎಂದು ರಷ್ಯಾ ಅಧ್ಯಕ್ಷರ ಕಚೇರಿ-ಕ್ರೆಮ್ಲಿನ್ ತಿಳಿಸಿದೆ. ಡಿಸೆಂಬರ್ ನಂತರದ ಮೊದಲ ಮಾತುಕತೆಯಲ್ಲಿ ಉಭಯ ನಾಯಕರು ಒಂದು ಗಂಟೆ ಕಾಲ ಮಾತುಕತೆ ನಡೆಸಿದರು ಎಂದು ರಷ್ಯಾ ಅಧ್ಯಕ್ಷರ ರಾಜತಾಂತ್ರಿಕ ಸಲಹೆಗಾರ ಯೂರಿ ಉಷಾಕೋವ್ ಹೇಳಿದ್ದಾರೆ. ಇರಾನ್ ವಿರುದ್ಧದ ಅಮೆರಿಕ-ಇಸ್ರೇಲ್ ಯುದ್ಧಕ್ಕೆ ತ್ವರಿತ ರಾಜಕೀಯ ಮತ್ತು ರಾಜತಾಂತ್ರಿಕ ಇತ್ಯರ್ಥಕ್ಕೆ ರಷ್ಯಾ ಅಧ್ಯಕ್ಷ ಪುಟಿನ್ ಕರೆ ನೀಡಿದ್ದಾರೆ. ಇರಾನ್, ರಷ್ಯಾಕ್ಕೆ ಪ್ರಮುಖ ಮಿತ್ರ ರಾಷ್ಟ್ರವಾಗಿದೆ ಎಂದು ಅವರು ತಿಳಿಸಿದ್ದಾರೆ. ಉಕ್ರೇನ್ ಯುದ್ಧದಲ್ಲಿ ರಷ್ಯಾದ ಪಡೆಗಳು ಹೆಚ್ಚಿನ ಯಶಸ್ಸಿನೊಂದಿಗೆ ಮುಂದುವರಿಯುತ್ತಿದ್ದು, ಪ್ರಸ್ತುತ ಪರಿಸ್ಥಿತಿಯ ವಿವರಣೆಯನ್ನು ಸಹ ಪುಟಿನ್ ಅವರು ಡೊನಾಲ್ಡ್ ಟ್ರಂಪ್ ಅವರಿಗೆ ನೀಡಿದರು ಎಂದು ಯೂರಿ ಉಷಾಕೋವ್ ಮಾಹಿತಿ ನೀಡಿದರು.

<><><><>

ಹೈದರಾಬಾದ್‌ನಲ್ಲಿ ನಿನ್ನೆ ನಡೆದ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ರ ಅರ್ಹತಾ ಸುತ್ತಿನ ಬಿ ಗುಂಪಿನ ಎರಡನೇ ಪಂದ್ಯದಲ್ಲಿ ಭಾರತ ತಂಡ, ಸ್ಕಾಟ್ಲೆಂಡ್ ವಿರುದ್ಧ ೨-೨ ಗೋಲುಗಳಿಂದ ಡ್ರಾ ಸಾಧಿಸಿತು. ಭಾರತ ತಂಡ, ಮೊದಲರ್ಧಾವಧಿಯಲ್ಲಿ ೨-೦ ಗೋಲುಗಳಿಂದ ಮುನ್ನಡೆ ಪಡೆದು ಉತ್ತಮ ಸ್ಥಾನದಲ್ಲಿತ್ತು. ಆದರೆ ಸ್ಕಾಟ್ಲೆಂಡ್, ತೃತೀಯ ಅವಧಿಯಲ್ಲಿ ಮತ್ತೊಂದು ಗೋಲು ಗಳಿಸುವ ಮೂಲಕ ಸಮಬಲ ಸಾಧಿಸಿತು. ಹೈದರಾಬಾದ್ ಮತ್ತು ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆಯುವ ಅರ್ಹತಾ ಪಂದ್ಯಾವಳಿಗಳಲ್ಲಿ ಮೊದಲ, ಎರಡನೇ ಮತ್ತು ಮೂರನೇ ಸ್ಥಾನ ಪಡೆಯುವ ತಂಡಗಳು ೨೦೨೬ ರ ಮಹಿಳಾ ಹಾಕಿ ವಿಶ್ವಕಪ್‌ಗೆ ನೇರ ಅರ್ಹತೆಯನ್ನು ಪಡೆಯುತ್ತವೆ. ಈ ವರ್ಷ ಹಾಕಿ ವಿಶ್ವಕಪ್ ಪಂದ್ಯಾವಳಿಯನ್ನು ಬೆಲ್ಜಿಯಂ ಮತ್ತು ನೆದರ್ಲ್ಯಾಂಡ್ಸ್ ದೇಶಗಳು ಜಂಟಿಯಾಗಿ ಆಯೋಜಿಸಲಿವೆ.

<><><><>

ನವದೆಹಲಿಯಲ್ಲಿ ನಿನ್ನೆ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯ ಅವರು ನ್ಯೂಜಿಲೆಂಡ್‌ನ ಕ್ರೀಡಾ ನಿಯೋಗದೊಂದಿಗೆ ಉನ್ನತ ಮಟ್ಟದ ಸಭೆಯಲ್ಲಿ

ಭಾಗವಹಿಸಿದ್ದರು. ಕ್ರೀಡೆಯಲ್ಲಿ ದ್ವಿಪಕ್ಷೀಯ ಸಹಕಾರವನ್ನು ವಿಸ್ತರಿಸುವ ಬಗ್ಗೆ ಹಾಗೂ ಭಾರತ-ನ್ಯೂಜಿಲೆಂಡ್ ನಡುವಿನ ಸಹಯೋಗ ಬಲಪಡಿಸುವತ್ತ ಈ ಸಭೆ ಗಮನಹರಿಸಿತು. ಸಭೆಯಲ್ಲಿ, ಎರಡೂ ಕಡೆಯವರು ಭಾರತ-ನ್ಯೂಜಿಲೆಂಡ್ ಶತಮಾನೋತ್ಸವ ಕ್ರೀಡಾ ಸಹಕಾರ ಕಾರ್ಯಕ್ರಮ ೨೦೨೬ ಅನ್ನು ಪ್ರಾರಂಭಿಸುವ ಬಗ್ಗೆ ಚರ್ಚಿಸಿದರು. ದೀರ್ಘಕಾಲೀನ ಕ್ರೀಡಾ ಸಹಯೋಗ ಬಲಪಡಿಸಲು ಜಂಟಿ ಕಾರ್ಯಪಡೆಯನ್ನು ರಚಿಸಲು ಎರಡೂ ದೇಶಗಳು ಒಪ್ಪಿಕೊಂಡವು. ಈ ವರ್ಷ ಎರಡು ದೇಶಗಳ ನಡುವಿನ ಕ್ರೀಡಾ ಸಂಬಂಧಗಳು ೧೦೦ ವರ್ಷಗಳನ್ನು ಪೂರೈಸುತ್ತಿವೆ. ಭಾರತೀಯ ನಿಯೋಗದಲ್ಲಿ ಕ್ರೀಡಾ ಕಾರ್ಯದರ್ಶಿ ಹರಿ ರಂಜನ್ ರಾವ್ ಸೇರಿದಂತೆ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಭಾರತ ಕ್ರೀಡಾ ಪ್ರಾಧಿಕಾರ ಮತ್ತು ಭಾರತೀಯ ಒಲಿಂಪಿಕ್ ಅಸೋಸಿಯೇಷನ್‌ನ ಹಿರಿಯ ಅಧಿಕಾರಿಗಳು ಇದ್ದರು.

<><><><>

ಶ್ರೀಲಂಕಾ ಕ್ರಿಕೆಟ್ ಸಂಸ್ಥೆಯು, ದಕ್ಷಿಣ ಆಫ್ರಿಕಾದ ಮಾಜಿ ಕ್ರಿಕೆಟಿಗ ಗ್ಯಾರಿ ಕರ್ಸ್ಟನ್ ಅವರನ್ನು ಏಪ್ರಿಲ್ ೧೫ ರಿಂದ ಜಾರಿಗೆ ಬರುವಂತೆ ಶ್ರೀಲಂಕಾ ಪುರುಷರ ತಂಡದ ನೂತನ ಮುಖ್ಯ ತರಬೇತುದಾರರನ್ನಾಗಿ ನೇಮಕ ಮಾಡಿದೆ. ಕರ್ಸ್ಟನ್ ಅವರು ೨೦೦೮ ರಿಂದ ೨೦೧೧ ರವರೆಗೆ ಭಾರತ ತಂಡದ ಮುಖ್ಯ ತರಬೇತುದಾರರಾಗಿ ಹಾಗೂ ೨೦೧೧ ರಿಂದ ೨೦೧೩ ರವರೆಗೆ ದಕ್ಷಿಣ ಆಫ್ರಿಕಾ ಪುರುಷರ ತಂಡದ ಮುಖ್ಯ ತರಬೇತುದಾರರಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಇವರ ಅವಧಿಯಲ್ಲಿ ಭಾರತ, ೨೦೧೧ ರ ಐಸಿಸಿ ಪುರುಷರ ಕ್ರಿಕೆಟ್ ವಿಶ್ವಕಪ್ ಅನ್ನು ಗೆದ್ದಿತು ಮತ್ತು ೨೦೧೩ರಲ್ಲಿ ದಕ್ಷಿಣ ಆಫ್ರಿಕಾ ಎಲ್ಲಾ ಸ್ವರೂಪಗಳಲ್ಲಿ ನಂಬರ್ ೧-ರ್‍ಯಾಂಕ್ ಪಡೆದಿತ್ತು.

<><><><>

ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಕೇಂದ್ರ ಸರ್ಕಾರ ಇಲ್ಲಿಯವರೆಗೆ ಬಡ ಕುಟುಂಬಗಳ ಮಹಿಳೆಯರಿಗೆ ೧೦ ಕೋಟಿ ೫೧ ಲಕ್ಷ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ರಾಜ್ಯ ಸಚಿವ ಸುರೇಶ್ ಗೋಪಿ ತಿಳಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>